703 (1201) ಶ್ರೀ ಬಾಲರಾಜ್ ಎಸ್. (ಕೊಳ್ಳೆಗಾಲ) :–

ಮೀನುಗಾರಿಕೆ ಮತ್ತು ಮುಜುರಾಯಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದ ಕೊಳ್ಳೆಗಾಲ ಕ್ಷೇತ್ರದಲ್ಲಿ ಅತಿ ಹೆಚ್ಚು ಒಳನಾಡು ಮೀನುಗಾರರಿರುವುದು ಸರಕಾರದ ಗಮನಕ್ಕೆ ಬಂದಿದೆಯೆ ;

ಆ) ಹಾಗಿದ್ದಲ್ಲಿ, ಮತ್ಸ್ಯಾಶ್ರಯ ಯೋಜನೆಯಡಿಯಲ್ಲಿ ಮನೆಗಳನ್ನು ನೀಡುತ್ತಿರುವ ಪ್ರಮಾಣ ಕಡಿಮೆಯಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಇ) ಈ ಯೋಜನೆಯಡಿಯ ಮುಂದಿನ ಸಾಲಿನಲ್ಲಿ ಮೀನುಗಾರರ ಸಂಖ್ಯೆಗಳಿಗನುಗುಣವಾಗಿ ಮತ್ಸ್ಯಾಶ್ರಯ ಮನೆಗಳನ್ನು ನೀಡಲು ಸರಕಾರ ಕ್ರಮ ಕೈಗೊಳ್ಳುವುದೇ ;

ಈ) ಪ್ರಸ್ತುತ ಸಾಲಿನಲ್ಲಿ ಮೀನುಗಾರರಿಗೆ ಎಷ್ಟು ವಸತಿ ಮನೆಗಳನ್ನು ಕಲ್ಪಿಸಲಾಗುವ ಗುರಿ ಹೊಂದಲಾಗಿದೆ ?

ಶ್ರೀ ಬಿ. ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು) :–

ಅ) ರಾಜ್ಯದ ಅನೇಕ ತಾಲ್ಲೂಕಗಳಲ್ಲಿ ಹೆಚ್ಚು ಮೀನುಗಾರಿರುವಂತೆ ಕೊಳ್ಳೇಗಾಲ ಕ್ಷೇತ್ರದಲ್ಲಿ ಸಹ ಹೆಚ್ಚು ಮೀನುಗಾರರಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಲಭ್ಯವಾಗುವ ಅನುದಾನಕ್ಕೆ ಅನುಗುಣವಾಗಿ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನೀಡಲಾಗುತ್ತಿದೆ.

ಇ) ನಿರ್ವಸತಿ ಮೀನುಗಾರರಿಂದ ಮನೆಗಳಿಗೆ ಹೆಚ್ಚು ಬೇಡಿಕೆ ಇರುವುದರಿಂದ ಲಭ್ಯವಾಗುವ ಅನುದಾನ ಆಧರಿಸಿ ಮುಂದಿನ ವರ್ಷಗಳಲ್ಲಿ ಮನೆಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ಈ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಶ್ರೀ ಬಿಳಿಗಿರಿ ರಂಗನಾಥ ದೇವಸ್ಥಾನದ ಅಭಿವೃದ್ಧಿ

705 (1203) ಶ್ರೀ ಬಾಲರಾಜ್ ಎಸ್. (ಕೊಳ್ಳೆಗಾಲ) :–

ಮೀನುಗಾರಿಕೆ ಮತ್ತು ಮುಜುರಾಯಿ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ಯಳಂದೂರು ತಾಲ್ಲೂಕಿನ ಬಿಳಿಗಿರಿ ರಂಗನ ಬೆಟ್ಟವು ಧಾರ್ಮಿಕ ಕ್ಷೇತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

ಆ) ಹಾಗಿದ್ದಲ್ಲಿ, ದೇವಸ್ಥಾನದ ಪೂರ್ಣ ಪ್ರಮಾಣದ ಅಭಿವೃದ್ಧಿಗೋಸ್ಕರ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳುವ ಯೋಜನೆ ಸರಕಾರಕ್ಕಿದೆಯೇ ;

ಇ) ಇದ್ದಲ್ಲಿ, ದೇವಸ್ಥಾನದ ಅಭಿವೃದ್ಧಿ ಕಾಮಗಾರಿಯ ಮಾಸ್ಟರ್ ಪ್ಲಾನ್ ತಯಾರಿಸಲಾಗಿದೆಯೇ ?

ಶ್ರೀ ಬಿ. ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು) :–

ಅ) ಹೌದು

ಆ) ಹೌದು

ಇ) ಹೌದು

ತಯಾರಿಸಲಾಗಿದೆ.

706 (1204) ಶ್ರೀ ಬಾಲರಾಜ್ ಎಸ್. (ಕೊಳ್ಳೇಗಾಲ):–

ತೋಟಗಾರಿಕೆ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ ತೋಟಗಾರಿಕಾ ಇಲಾಖೆಯಿಂದ ರೂಪಿಸಿರುವ ಕಾರ್ಯಕ್ರಮಗಳು ಮತ್ತು ಯೋಜನೆಗಳು ಯಾವುವು (ವಿವರ ನೀಡುವುದು) ;

ಆ) ಈ ಇಲಾಖೆಗೆ ಬಿಡುಗಡೆಯಾದ ಅನುದಾನವೆಷ್ಟು ;

ಇ) ಇಲಾಖೆಯಿಂದ ಕೊಳ್ಳೇಗಾಲ ಕ್ಷೇತ್ರಕ್ಕೆ ರೂಪಿಸಿರುವ ಯೋಜನೆಗಳು ಯಾವುವು;

ಈ) ಈ ಯೋಜನೆಗಳು ಯಾವ ಹಂತದಲ್ಲಿವೆ ;

ಉ) ಇಲಾಖಾ ಕಾರ್ಯಕ್ರಮಗಳು ಯಶಸ್ವಿಯಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಊ) ಕೊಳ್ಳೇಗಾಲ ಕ್ಷೇತ್ರದ ಯಳಂದೂರು ಮತ್ತು ಕೊಳ್ಳೇಗಾಲ ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಗಳ ಯೋಜನೆ/ಕಾರ್ಯಕ್ರಮಗಳು ರೂಪಿಸಲು ಗುರುತಿಸಲಾದ ಸ್ಥಳಗಳಾವುವು ;

ಋ) ಈ ಯೋಜನೆಗಳು ಸಾರ್ವಜನಿಕರಿಗೆ ಉಪಯೋಗಿಸುವಂತೆ ಸ್ಥಳೀಕರಣಗೊಳಿಸಲಾಗುವುದೇ ?

ಶ್ರೀ ಶಶಿಕಾಂತ ಅ ನಾಯಕ್ (ತೋಟಗಾರಿಕೆ ಸಚಿವರು) :–

ಅ) ರಾಜ್ಯದಲ್ಲಿ ತೋಟಗಾರಿಕಾ ಇಲಾಖೆಯಿಂದ ರೂಪಿಸಿರುವ ಕಾರ್ಯಕ್ರಮಗಳು ಮತ್ತು ಯೋಜನೆಗಳ ವಿವರ ಈ ಕೆಳಕಂಡಂತಿವೆ.

ನಿರ್ದೇಶನ ಮತ್ತು ಆಡಳಿತ

1. ಬಿಜಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ತೋಟಗಾರಿಕೆ ಬೆಳೆಗಳಿಗಾಗಿ ಹನಿ ನೀರಾವರಿ ಯೋಜನೆ
2. ರೈತರ ಕ್ಷೇತ್ರಗಳಲ್ಲಿ ಇಸ್ರೇಲಿ ತಂತ್ರಜ್ಞಾನದ ಅಳವಡಿಕೆಗಾಗಿ ಪ್ರಾಯೋಗಿಕ ಯೋಜನೆ
3. ತೋಟಗಾರಿಕೆ ಕ್ಷೇತ್ರ ಮತ್ತು ನರ್ಸರಿಗಳ ಅಭಿವೃದ್ಧಿ ಮತ್ತು ನಿರ್ವಹಣೆ
4. ಇಲಾಖಾ ಪ್ರಯೋಗಶಾಲೆಗಳ ಅಭಿವೃದ್ಧಿ